# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ

**ದಿನಾಂಕ: 23-03-2018**

**ಪ್ರಕಟಣೆಯ ಕೃಪೆಗಾಗಿ............**

ವಿಜಯಪುರ: ನಮ್ಮ ಚರಿತ್ರೆಯನ್ನು ಅಳೆಯಲು ಇರುವ ಮಾನದಂಡಗಳೆಂದರೆ ಈ ಐತಿಹಾಸಿಕ ಸ್ಮಾರಕಗಳು ಎಂದು ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ.ಎಸ್.ಕೆ. ಕಲ್ಲೋಳಿಕರ ಅಭಿಪ್ರಾಯಪಟ್ಟರು.

ಮಹಿಳಾ ವಿವಿ ಜ್ಞಾನಶಕ್ತಿ ಆವರಣ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಗಾರ ಇಲಾಖೆ, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಪ.ಜಾ./ಪ.ಪಂ. ಘಟಕ ಹಾಗೂ ಇತಿಹಾಸ ವಿಭಾಗ ಇವರ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಐತಿಹಾಸಿಕ ಸಂಪನ್ಮೂಲಗಳ ಮಹತ್ವ ಕುರಿತ ಜಾಗೃತಿ ಹಾಗೂ ಕರ್ನಾಟಕ ಕೋಟೆಗಳ ಕುರಿತ ಛಾಯಾಚಿತ್ರ ಪ್ರದರ್ಶನದ ಮೂರು ದಿನದ ಕಾರ್ಯಾಗಾರದ ಸಮಾರೋಪ ಸಮಾರಂಭ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಯಾರು ಇತಿಹಾಸವನ್ನು ಮರೆಯುತ್ತಾರೋ ಅವರು ಇತಿಹಾಸವನ್ನು ಸೃಷ್ಟಿಸಲಾರರು ಎಂಬ ಡಾ.ಬಿ.ಆರ್.ಅಂಬೇಡ್ಕರ್ ಅವರ ಮಾತನ್ನು ನೆನೆಪಿಸಿದ ಅವರು, ಬ್ರಿಟಿಷ್ ಆಡಳಿತ ಕಾಲದಲ್ಲಿ ಭಾರತಿಯರಿಗೆ ಐತಿಹಾಸಿಕ ಶಾಸನಗಳ ದಾಖಲೆಯ ಕೊರತೆಯಿತ್ತು. ದಾಖಲೆಗಳು ಪ್ರಬಲವಾಗಿದ್ದರೆ ಭಾರತದ ಇತಿಹಾಸ ಜಗತ್ತಿನ ಉನ್ನತ ಸ್ಥಾನದಲ್ಲಿ ಇರುತ್ತಿತ್ತು ಎಂದು ಕಳವಳ ವ್ಯಕ್ತಪಡಿಸಿದರು.

ಇತಿಹಾಸ ಎಂದರೆ ಸತ್ಯಶೋಧನೆಯ ಕಾರ್ಯ. ಇತಿಹಾಸವನ್ನು ಅಭ್ಯಸಿಸಲು ದಾಖಲೆಗಳಲ್ಲಿರುವ ಸತ್ಯಾಸತ್ಯತೆಯನ್ನು ಪರಿಶೀಲಿಸುವುದು ಅತ್ಯವಶ್ಯಕ. ಇತಿಹಾಸ ಅರಿಯಲು ಹಿಂದಾದ ತಪ್ಪುಗಳು ಮರುಕಳಿಸದೆ ಭವಿಷ್ಯ ಮುಂದೆ ಸಾಗುವಂತೆ ಮಾಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿ ಮೌಲ್ಯಮಾಪನ ಕುಲಸಚಿವ ಪ್ರೊ.ಎಸ್.ಬಿ. ಮಾಡಗಿ ಮಾತನಾಡಿ, ಪತ್ರಗಾರ ಇಲಾಖೆಯ ಕಾರ್ಯ ಹಾಗೂ ಪ್ರಾಮುಖ್ಯತೆ ಈ ಎರಡು ದಿನದ ಕಾರ್ಯಾಗಾರದಿಂದ ತಿಳಿದು ಬಂದಿದ್ದು, ವಿದ್ಯಾರ್ಥಿನಿಯರು ಈ ಎಲ್ಲ ಅಂಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ವಿದ್ಯಾರ್ಥಿನಿಯರಿಗೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ವಿಧ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯದ ನಿರ್ದೇಶಕ ಪ್ರೊ.ಓಂಕಾರ ಕಾಕಡೆ, ವಿಧ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯದ ಸಹಾಯಕ ನಿರ್ದೇಶಕ ಡಾ.ಹನುಮಂತಯ್ಯ ಪೂಜಾರಿ, ಪ.ಜಾ./ಪ.ಪಂ. ಘಟಕದ ನಿರ್ದೇಶಕ ಡಾ.ಸಕ್ಪಾಲ್ ಹೂವಣ್ಣ, ಇತಿಹಾಸ ವಿಭಾಗದ ಪ್ರಾಧ್ಯಾಪಕ ಡಾ.ಆರ್.ವಿ. ಗಂಗಶೆಟ್ಟಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿನಿಯರು ಹೊರತಂದ ಮಹಿಳಾ ಧ್ವನಿ ವಿಶೇಷ ಸಂಚಿಕೆಯನ್ನು ಬಿಡುಗಡೆ ಮಾಡಲಾಯಿತು. ವಿವಿಧ ನಿಖಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಬೋಧಕ-ಬೋಧಕೇತರ ಸಿಬ್ಬಂದಿ

ವರ್ಗದವರು, ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಯರು ಹಾಗೂ ಮತ್ತಿತರರು ಭಾಗವಹಿಸಿದ್ದರು.

ವಿಜಯಲಕ್ಷ್ಮೀ ಪತ್ತಾರ ಪ್ರಾರ್ಥಿಸಿದರು. ಎಮ್.ಎಸ್.ಮುಜಾವರ ಪರಿಚಯಿಸಿದರು. ಭಾರತಿ ಹಿರೇಮಠ ನಿರೂಪಿಸಿದರು.

**ಫೋಟೋ ಕ್ಯಾಪ್ಷನ್:**

1) **ಮಹಿಳಾ ವಿವಿ ಜ್ಞಾನಶಕ್ತಿ ಆವರಣ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಗಾರ ಇಲಾಖೆ, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಪ.ಜಾ./ಪ.ಪಂ. ಘಟಕ ಹಾಗೂ ಇತಿಹಾಸ ವಿಭಾಗ ಇವರ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಐತಿಹಾಸಿಕ ಸಂಪನ್ಮೂಲಗಳ ಮಹತ್ವ ಕುರಿತ ಜಾಗೃತಿ ಹಾಗೂ ಕರ್ನಾಟಕ ಕೋಟೆಗಳ ಕುರಿತ ಛಾಯಾಚಿತ್ರ ಪ್ರದರ್ಶನದ ಮೂರು ದಿನದ ಕಾರ್ಯಾಗಾರದ ಸಮಾರೋಪ ಸಮಾರಂಭ ಕಾರ್ಯಕ್ರಮದಲ್ಲಿ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ.ಎಸ್.ಕೆ. ಕಲ್ಲೋಳಿಕರ ಮಾತನಾಡಿದರು.**

2) **ಮಹಿಳಾ ವಿವಿ ಜ್ಞಾನಶಕ್ತಿ ಆವರಣ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಗಾರ ಇಲಾಖೆ, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಪ.ಜಾ./ಪ.ಪಂ. ಘಟಕ ಹಾಗೂ ಇತಿಹಾಸ ವಿಭಾಗ ಇವರ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಐತಿಹಾಸಿಕ ಸಂಪನ್ಮೂಲಗಳ ಮಹತ್ವ ಕುರಿತ ಜಾಗೃತಿ ಹಾಗೂ ಕರ್ನಾಟಕ ಕೋಟೆಗಳ ಕುರಿತ ಛಾಯಾಚಿತ್ರ ಪ್ರದರ್ಶನದ ಮೂರು ದಿನದ ಕಾರ್ಯಾಗಾರದ ಸಮಾರೋಪ ಸಮಾರಂಭ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿ ಮೌಲ್ಯಮಾಪನ ಕುಲಸಚಿವ ಪ್ರೊ.ಎಸ್.ಬಿ. ಮಾಡಗಿ ಮಾತನಾಡಿದರು.**

3) **ಮಹಿಳಾ ವಿವಿ ಜ್ಞಾನಶಕ್ತಿ ಆವರಣ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕರ್ನಾಟಕ ರಾಜ್ಯ ಪತ್ರಗಾರ ಇಲಾಖೆ, ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಪ.ಜಾ./ಪ.ಪಂ. ಘಟಕ ಹಾಗೂ ಇತಿಹಾಸ ವಿಭಾಗ ಇವರ ಸಂಯುಕ್ತ ಆಶ್ರಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಐತಿಹಾಸಿಕ ಸಂಪನ್ಮೂಲಗಳ ಮಹತ್ವ ಕುರಿತ ಜಾಗೃತಿ ಹಾಗೂ ಕರ್ನಾಟಕ ಕೋಟೆಗಳ ಕುರಿತ ಛಾಯಾಚಿತ್ರ ಪ್ರದರ್ಶನದ ಮೂರು ದಿನದ ಕಾರ್ಯಾಗಾರದ ಸಮಾರೋಪ ಸಮಾರಂಭ ಕಾರ್ಯಕ್ರಮದಲ್ಲಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿನಿಯರು ಹೊರತಂದ ಮಹಿಳಾ ಧ್ವನಿ ವಿಶೇಷ ಸಂಚಿಕೆಯನ್ನು ಬಿಡುಗಡೆ ಮಾಡಲಾಯಿತು.**




ಕರ್ನಾಟಕ ರಾಜ್ಯ ಪತ್ರಗಾರ ಇಲಾಖೆ,
ಬೆಂಗಳೂರು ಮತ್ತು
ಅಕ್ಕಮಹಾದೇವಿ ಮಹಿಳಾ
ಐತಿಹಾಸಿಕ ಸಂಪನ್ಮೂಲಗಳ ಮಹತ್ವ
ಕುರಿತ ಜಾಗೃತಿ ಕಾರ್ಯಾಗಾರ